ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-1

ಸಂಖ್ಯೆ:ಸಿ4(7)ಪ್ರಾ.ಶಿ&ಪ್ರೌ.ಶಾ.ಶಿ.ವರ್ಗ/01/2012-13 ದಿನಾಂಕ:23.05.2012

## ಸೂಚನೆ

## ವರ್ಗಾವಣೆ ಬಯಸುವ ಪ್ರೌಢಶಾಲಾ ಶಿಕ್ಷಕರ ಗಮನಕ್ಕೆ

1. ದಿನಾಂಕ: **22.05.2012** ರಂದು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆಗೆ ಸಂಬಂಧಿಸಿದಂತೆ ಅಂತಿಮ ಆದ್ಯತಾ ಪಟ್ಟಿಯನ್ನು ಪ್ರಕಟಿಸಿದೆ. ಮತ್ತು ಇಲಾಖಾ ವೆಬ್-ಸೈಟಿನಲ್ಲಿಯೂ ಸಹ ಪ್ರಕಟಿಸಲಾಗಿದೆ.

2. ಆದ್ದರಿಂದ ದಿನಾಂಕ: **26.05.2012** ರಂದು ಅಂತಿಮ ಆದ್ಯತಾ ಪಟ್ಟಿಯ ಕ್ರಮಸಂಖ್ಯೆ **001** ರಿಂದ **200** ವರೆಗಿನ ಪ್ರೌಢಶಾಲಾ ಸಹಶಿಕ್ಷಕರು ಹಾಗೂ ದಿನಾಂಕ:**27.05.2012** ರಂದು ಕ್ರಮಸಂಖ್ಯೆ **201** ರಿಂದ **450** ರವರೆಗಿನ ಪ್ರೌಢಶಾಲಾ ಸಹಶಿಕ್ಷಕರು ಮಾತ್ರ ಸಂಬಂಧಿಸಿದ ವರ್ಗಾವಣೆ ಕೇಂದ್ರಗಳಲ್ಲಿ ಬೆಳಿಗ್ಗೆ **09.00** ಗಂಟೆಗೆ ವರ್ಗಾವಣೆ ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಚಿಸಿದೆ. ಮುಂದಿನ ಕ್ರಮಸಂಖ್ಯೆಯ ವಿವರಗಳನ್ನು ಅಂದರೆ ದಿನಾಂಕ:**27.05.2012** ರಂದು ಇಲಾಖೆಯ ವೆಬ್-ಸೈಟ್‌ನಲ್ಲಿ ಪ್ರಕಟಿಸಲಾಗುವುದು.

3. ವಿವಾಹಿತ ಪ್ರಕರಣಗಳಲ್ಲಿ ಆದ್ಯತೆ ಕೋರಿ ಅರ್ಜಿ ಸಲ್ಲಿಸಿರುವ ಪ್ರೌಢಶಾಲಾ ಶಿಕ್ಷಕರು ವಿಭಾಗೀಯ ಜೇಷ್ಠತೆ ಹೊಂದಿದ್ದಲ್ಲಿ (ವಿಭಾಗೀಯ ಸಹನಿರ್ದೇಶಕರಿಂದ ನೇಮಕಾತಿ ಆದೇಶ ಪಡೆದವರು) ಸಂಗಾತಿ ಕರ್ತವ್ಯ ನಿರ್ವಹಿಸುತ್ತಿರುವ ವಿಭಾಗೀಯ ವ್ಯಾಪ್ತಿಯಲ್ಲಿ ಮಾತ್ರ ಸ್ಥಳ ಆಯ್ಕೆ ಮಾಡಿಕೊಳ್ಳಲು ಅವಕಾಶ ಇದೆ. ಜಿಲ್ಲಾ ಜೇಷ್ಠತೆ ಹೊಂದಿದ್ದಲ್ಲಿ (ಜಿಲ್ಲಾ ಉಪನಿರ್ದೇಶಕರಿಂದ ನೇಮಕಾತಿ ಆದೇಶ ಪಡೆದವರು) ಸಂಗಾತಿ ಕರ್ತವ್ಯ ನಿರ್ವಹಿಸುತ್ತಿರುವ ಶಾಲೆಯ ಜಿಲ್ಲೆಯ ವ್ಯಾಪ್ತಿಯಲ್ಲಿ ಮಾತ್ರ ಸ್ಥಳ ಆಯ್ಕೆ ಮಾಡಿಕೊಳ್ಳಲು ಅವಕಾಶ ಇದೆ.

23-05-12

ನಿರ್ದೇಶಕರು (ಪ್ರೌಢಶಿಕ್ಷಣ) ಹಾಗೂ
ರಾಜ್ಯ ಮಟ್ಟದ ವರ್ಗಾವಣಾ ಪ್ರಾಧಿಕಾರಿಗಳು